ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಡಾ॥ ಯತೀಂದ್ರ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 137 |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 10–12–2024 |

****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರವು 2024ನೇ ಸಾಲಿನ ಆಯವ್ಯಯದಲ್ಲೂ ಮೈಸೂರು ವಿಭಾಗದಲ್ಲಿ "ಜವಳಿ ಪಾರ್ಕ್‌ಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದ್ದು, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | 2024–25ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ–330 ರಲ್ಲಿ "**ಕಿತ್ತೂರು ಕರ್ನಾಟಕ, ಕಲ್ಯಾಣ ಕರ್ನಾಟಕ (ರಾಯಚೂರು) ಮತ್ತು ಮೈಸೂರು ವಿಭಾಗಗಳಲ್ಲಿ ನೂತನ ಜವಳಿ ಪಾರ್ಕ್‌ಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಪ್ರಾರಂಭಿಸಲಾಗುವುದು. ಇದರಿಂದ ಸುಮಾರು 10000 ಉದ್ಯೋಗ ಸೃಷ್ಟಿಯಾಗಲಿದೆ**" ಎಂದು ಘೋಷಿಸಿಲಾಗಿರುತ್ತದೆ.<br><br>ಮೈಸೂರು ವಿಭಾಗದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ನೂತನ ಜವಳಿ ಪಾರ್ಕ್‌ನ್ನು ಸ್ಥಾಪಿಸಲು ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕು, ಚೀಲನ ಹಳ್ಳಿ ಗ್ರಾಮದ ಸರ್ವೆ ನಂ.53 ರಲ್ಲಿ 13 ಎಕರೆ ಜಮೀನು ಹಾಗೂ ಚಿಕ್ಕಮಗಳೂರು ಜಿಲ್ಲೆ ಮತ್ತು ತಾಲ್ಲೂಕಿನ ಲಕ್ಯಾ ಹೋಬಳಿಯ ಹಿರೇಗೌಜ ಗ್ರಾಮದ ಸ.ನಂ.111 ರಲ್ಲಿ 15–00 ಎಕರೆ ಸರ್ಕಾರಿ ಗೋಮಾಳ ಜಮೀನನ್ನು ಜವಳಿ ಪಾರ್ಕ್ ಸ್ಥಾಪಿಸುವ ಉದ್ದೇಶಕ್ಕಾಗಿ ಕೈಮಗ್ಗ ಮತ್ತು ಜವಳಿ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ.<br><br>ಈ ಎರಡೂ ಸ್ಥಳಗಳಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿ(ಪಿ.ಪಿ.ಪಿ) ಯಲ್ಲಿ ಜವಳಿ ಪಾರ್ಕ್‌ನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು. |

…2

| | | |
|---|---|---|
| (ಆ) | ವರುಣ ವಿಧಾನಸಭಾ ಕ್ಷೇತ್ರವು ಶೇಕಡಾ 90ರಷ್ಟು ಗ್ರಾಮೀಣ ಪ್ರದೇಶ ಹೊಂದಿದ್ದು, ಈ ಭಾಗದಲ್ಲಿ ಪ್ರಸ್ತಾಪಿತ "ಜವಳಿ ಪಾರ್ಕ್‌ನ್ನು" ಸ್ಥಾಪಿಸಿದಲ್ಲಿ ಆ ಭಾಗದ ಗ್ರಾಮೀಣ ಮಹಿಳೆಯರಿಗೆ ಉದ್ಯೋಗವಕಾಶ ದೊರೆಯಲಿದ್ದು, ಈ ಕುರಿತು ಮುಂದೆ ಯಾವುದಾದರೂ ಪ್ರಸ್ತಾವವಿದೆಯೇ? (ವಿವರ ನೀಡುವುದು) | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: **CI 245 JAKE 2024**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು